ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 18-02-2017

# ಪತ್ರಿಕಾ ಆಮಂತ್ರಣ

1. ಕನ್ನಡ ಮತ್ತು ಸಂಸ್ಕೃತಿ ಇಲಾಖಾವತಿಯಿಂದ
ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ:

ಉದ್ಘಾಟನೆ:
ಶ್ರೀಮತಿ ಉಮಾಶ್ರೀ. ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಅಧ್ಯಕ್ಷತೆ:
ಆರ್. ವಿ. ದೇವರಾಜ್,
ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು,
ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ವಿಶೇಷ ಉಪನ್ಯಾಸ:
ಪಿ.ಜಿ.ಆರ್. ಸಿಂಧ್ಯಾ,
ಮಾಜಿ ಸಚಿವರು,

ಬೆಳಿಗ್ಗೆ : 10.00 ಗಂಟೆಗೆ ಛತ್ರಪತಿ ಶಿವಾಜಿ ಮಹಾರಾಜರ ಸ್ತಬ್ಧಚಿತ್ರ ಮತ್ತು ಜಾನಪದ ಕಲಾತಂಡಗಳ ಮೆರವಣಿಗೆ ಮಿನರ್ವ ವೃತ್ತದ ಅರಸೋಜಿರಾವ್ ಛತ್ರದಿಂದ ರವೀಂದ್ರ ಕಲಾಕ್ಷೇತ್ರದವರೆಗೆ.

ದಿನಾಂಕ: 19-02-2017, ಭಾನುವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ
ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

2. ಕನ್ನಡ ಮತ್ತು ಸಂಸ್ಕೃತಿ ಇಲಾಖಾವತಿಯಿಂದ
ಕವಿ ಸರ್ವಜ್ಞ ಜಯಂತಿ:

ಉದ್ಘಾಟನೆ:

ಶ್ರೀಮತಿ ಉಮಾಶ್ರೀ. ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಅಧ್ಯಕ್ಷತೆ:
ಆರ್. ವಿ. ದೇವರಾಜ್,
ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು,
ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ವಿಶೇಷ ಉಪನ್ಯಾಸ:

ಡಾ. ಎಂ.ಎಸ್. ಆಶಾದೇವಿ,
ಹಿರಿಯ ವಿಮರ್ಶಕರು.

ದಿನಾಂಕ: 20-02-2017, ಸೋಮವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ
ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

3. ಕೃಷಿ ಬೆಲೆ ಆಯೋಗದ ಪ್ರಾಯೋಜಿತ ಕಾರ್ಯಕ್ರಮ "ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ" ಕುರಿತು ಒಂದು ದಿನದ ಪ್ರಾರಂಭಿಕ ಕಾರ್ಯಾಗಾರ:
ಕೈಪಿಡಿ ಬಿಡುಗಡೆ
ಕೃಷ್ಣಭೈರೇಗೌಡರು, ಕೃಷಿ ಸಚಿವರು.

ಪ್ರಧಾನ ಭಾಷಣ:
ಡಾ. ದೇವೇಂದ್ರ ಶರ್ಮ, ಖ್ಯಾತ ಕೃಷಿ ಮತ್ತು ಆಹಾರ ನೀತಿ ವಿಮರ್ಶಕ.

ದಿನಾಂಕ: 20-02-2017, ಸೋಮವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ
ಸ್ಥಳ: ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆ, (ಐಸೆಕ್)
ಡಾ. ವಿ.ಕೆ.ಆರ್.ವಿ. ರಸ್ತೆ, ನಾಗರಬಾವಿ, ಬೆಂಗಳೂರು – 560 072.

**4. ಜಂಟಿ ಪತ್ರಿಕಾಗೋಷ್ಠಿ:**

"13ನೇ ಕೃಷಿ ವಿಜ್ಞಾನ ಕಾಂಗ್ರೆಸ್" ಕುರಿತಂತೆ

ಡಾ. ಎಸ್. ಅಯ್ಯಪ್ಪನ್, ಮಹಾ ನಿರ್ದೇಶಕರು, (ನಿವೃತ್ತ) ಭಾರತೀಯ ಅನುಸಂಧಾನ ಪರಿಷತ್ ನವದೆಹಲಿ ಮತ್ತು ಅಧ್ಯಕ್ಷರು ರಾಷ್ಟ್ರೀಯ ಕೃಷಿ ವಿಜ್ಞಾನಗಳ ಅಕಾಡೆಮಿ, ನವದೆಹಲಿ ಹಾಗೂ
ಡಾ. ಹೆಚ್. ಶಿವಣ್ಣ, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು. ದಿನಾಂಕ: ದಿನಾಂಕ: 20–02–2017, ಸೋಮವಾರ, ಸಮಯ: ಮಧ್ಯಾಹ್ನ 12.00 ಗಂಟೆಗೆ.

ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿ.ಕೆ.ವಿ.ಕೆ) ಯ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಭವನ, ಬೆಂಗಳೂರು.

ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 11.00 ಗಂಟೆಗೆ ನಗರದ ಕಬ್ಬನ್ ಪಾರ್ಕ್‌ನಲ್ಲಿರುವ ಪ್ರೆಸ್‌ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು, ಮೊಬೈಲ್ ಸಂಖ್ಯೆ 9972035456

## ಪತ್ರಿಕಾ ಪ್ರಕಟಣೆ

## ಏಪ್ರಿಲ್ ಮಾಹೆಯಲ್ಲಿ ರಾಜ್ಯಾದ್ಯಂತ ಪೋಲಿಯೋ ಲಸಿಕೆ ನೀಡಿಕೆ ಕಾರ್ಯಕ್ರಮ – ಸುಭೋದ್‌ಯಾದವ್

**ಬೆಂಗಳೂರು, ಫೆಬ್ರವರಿ 18, (ಕರ್ನಾಟಕ ವಾರ್ತೆ)**

ಬರುವ ಏಪ್ರಿಲ್ ಮಾಹೆಯಲ್ಲಿ ರಾಜ್ಯಾದ್ಯಂತ 0–5 ವರ್ಷದ ಒಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಲಾಗಿದ್ದು ಈ ಬಗ್ಗೆ

ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ರೋಗ–ನಿರೋಧಕ ಲಸಿಕೆ ನೀಡುವ ಈ ಕಾರ್ಯಕ್ರಮವನ್ನು ರಾಷ್ಟ್ರೀಯ ಲಸಿಕಾ ದಿನವನ್ನಾಗಿ ಆಚರಿಸಲು ಉದ್ದೇಶಿಸಲಾಗಿದೆ ಎಂದು ಆರೋಗ್ಯ ಮತ್ತು ಕಲ್ಯಾಣ ಇಲಾಖೆಗಳ ಆಯುಕ್ತ ಸುಭೋದ್ ಯಾದವ್ ತಿಳಿಸಿದ್ದಾರೆ.

ರಾಷ್ಟ್ರೀಯ ಲಸಿಕಾ ಆಚರಣೆ ಸಂಬಂಧ ಇಂದು ವಿಕಾಸಸೌಧದಲ್ಲಿ ನಡೆದ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಕೇಂದ್ರ ಸರ್ಕಾರದ ಆದೇಶದ ಮೇರೆಗೆ ಈಗಾಗಲೇ ರಾಜ್ಯದಲ್ಲಿ ರುಬೆಲ್ಲಾ ಹಾಗೂ ದಢಾರಾ ರೋಗ ನಿರೋಧಕ ಲಸಿಕೆ ನೀಡುವ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುವುತ್ತಿದೆ. ಈ ಕಾರ್ಯಕ್ರಮ ಅನುಷ್ಠಾನದಲ್ಲಿ ಉಡುಪಿ ಜಿಲ್ಲೆ ಮೊದಲಸ್ಥಾನದಲ್ಲಿದ್ದು, ಬೆಂಗಳೂರು ಮಹಾನಗರಪಾಲಿಕೆ ಕೊನೆಯ ಸ್ಥಾನದಲ್ಲಿದೆ ಎಂದು ಅವರು ಸಭೆಗೆ ಮಾಹಿತಿ ನೀಡಿದರು.

ರುಬೆಲ್ಲಾ ಮತ್ತು ದಢಾರ ರೋಗ ನಿರೋಧಕ ಲಸಿಕೆ ನೀಡುವ ಕಾರ್ಯಕ್ರಮ ಕುರಿತಂತೆ ಸಾಮಾಜಿಕ ಜಾಲತಾಣಗಳಲ್ಲಿ ಕೆಲವರು ಸುಳ್ಳು ಸುದ್ದಿಗಳನ್ನು ಹೆಚ್ಚಿಸುತ್ತಿರುವುದು ಗಮನಕ್ಕೆ ಬಂದಿದೆ. ಅಂತಹ ಪ್ರಕರಣಗಳ ಬಗ್ಗೆ ಪೊಲೀಸ್ ಇಲಾಖೆ ಗಮನಕ್ಕೆ ತಂದು ಪ್ರಕರಣ ದಾಖಲಿಸಲು ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸಾರ್ವಜನಿಕರು ಸಹ ಇಂತಹ ಸುಳ್ಳು ಸುದ್ದಿಗಳನ್ನು ಹರಡುವವರ ವಿರುದ್ಧ ಆರೋಗ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆಗೆ ದೂರು ನೀಡಬೇಕು ಎಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಈ ಬಾರಿಯ ಪಲ್ಸ್ ಪೋಲೀಯೋ ಲಸಿಕೆ ನೀಡುವ ಕಾರ್ಯಕ್ರಮದಲ್ಲಿ ವಲಸಿಗು, ಕಟ್ಟಡ ನಿರ್ಮಾಣ ಕಾರ್ಮಿಕರು, ಕಾರ್ಯನಿರ್ವಹಿಸುವ ಸ್ಥಳಗಳಲ್ಲಿ ಮತ್ತು ಮೆಟ್ರೊ ಹಾಗೂ ವಿಮಾನ ನಿಲ್ದಾಣಗಳಲ್ಲೂ ಸಹ ಪೋಲೀಯೋ ಲಸಿಕಾ ಕೇಂದ್ರ ತೆರೆದು ಲಸಿಕೆ ಹಾಕಲು ಈ ಬಾರಿ ಆಧ್ಯತೆ ಮೇರೆಗೆ ಕ್ರಮ ಜರುಗಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತ ಸುಭೋದ್ ಯಾದವ್ ಸಭೆಗೆ ಮಾಹಿತಿ ನೀಡಬೇಕು.

ಸಭೆಯಲ್ಲಿ ಅಭಿಯಾನದ ನೋಡಲ್ ಅಧಿಕಾರಿ ಡಾ. ರತನ್‌ಕೆಲ್‌ಕರ್ ಸೇರಿದಂತೆ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು, ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಜರಿದ್ದರು.

ಕೆಎನ್‌ಕೆ/ಕೆಪಿಪಿ/ಜಿಪಿಆರ್.

# ಲೋಕಾಯುಕ್ತರ ಮನವಿ

**ಬೆಂಗಳೂರು, ಫೆಬ್ರವರಿ 18, (ಕರ್ನಾಟಕ ವಾರ್ತೆ)**

ಲೋಕಾಯುಕ್ತರು ತಮ್ಮ ಆತ್ಮೀಯರು/ಪರಿಚಯದವರು ಎಂದು ಹೇಳಿಕೊಂಡು ಲಾಭ ಪಡೆಯಲು ಯಾರಾದರೂ ಯತ್ನಿಸಿದರೆ ಅಂಥವರ ವಿರುದ್ಧ ಕಾನೂನು ಕ್ರಮ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಲೋಕಾಯುಕ್ತದ ಎಲ್ಲ ಅಧಿಕಾರಿಗಳಿಗೆ ಸುತ್ತೋಲೆ ಹೊರಡಿಸಲಾಗಿದೆ.

ಲೋಕಾಯುಕ್ತ ನ್ಯಾಯಮೂರ್ತಿ ಶ್ರೀ ಪಿ. ವಿಶ್ವನಾಥ ಶೆಟ್ಟಿ ಅವರ ನಿರ್ದೇಶನದಂತೆ ಲೋಕಾಯುಕ್ತ ರಿಜಿಸ್ಟ್ರಾರ್ ಅವರು ಲೋಕಾಯುಕ್ತದ ಅಧಿಕಾರಿ, ಸಿಬ್ಬಂದಿ ಇಂತಹ ಯಾವುದೇ ಒತ್ತಡ ಪ್ರಭಾವಗಳಿಗೆ ಮಣಿಯದೆ ನಿಯಮಾನುಸಾರ ಪ್ರತಿ ಪ್ರಕರಣವನ್ನು ನಿರ್ವಹಿಸುವಂತೆ ಸುತ್ತೋಲೆಯಲ್ಲಿ ತಿಳಿಸಿದ್ದಾರೆ. ಈ ರೀತಿ ಪ್ರಬಾವ ಬೀರುವ ವ್ಯಕ್ತಿಗಳ ಬಗ್ಗೆ ಲೋಕಾಯುಕ್ತ ರಿಜಿಸ್ಟ್ರಾರ್ ಅವರಿಗೆ ವರದಿ ನೀಡುವಂತೆಯೂ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಎಸ್‌ಎಂ/ಕೆಎಂ

# ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗೆ ವ್ಯಕ್ತಿತ್ವ ಪರೀಕ್ಷೆ

**ಬೆಂಗಳೂರು, ಫೆಬ್ರವರಿ 18, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 2014 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗೆ ವ್ಯಕ್ತಿತ್ವ ಪರೀಕ್ಷೆಯನ್ನು ಫೆಬ್ರವರಿ 20 ರಂದು ನಡೆಸಲಿದೆ. ಅಭ್ಯರ್ಥಿಗಳು ವ್ಯಕ್ತಿತ್ವ ಪರೀಕ್ಷಾ ದಿನದಂದು ತಮ್ಮ ಮೂಲ ಆಧಾರ್ ಕಾರ್ಡ್/ಆಧಾರ್ ಸಂಖ್ಯೆಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

ವ್ಯಕ್ತಿತ್ವ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವ-ವಿವರಗಳ ನಮೂನೆಯನ್ನು ಆಯೋಗದ ವೈಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ವಿವರಗಳನ್ನು ಭರ್ತಿಮಾಡಿ ವ್ಯಕ್ತಿತ್ವ ಪರೀಕ್ಷೆಯ ದಿನದಂದು ಹಾಜರುಪಡಿಸಬೇಕು. ಅಭ್ಯರ್ಥಿಗಳಿಗೆ ವ್ಯಕ್ತಿತ್ವ ಪರೀಕ್ಷಾ ದಿನದಂದು ಬಯೋ-ಮೆಟ್ರಿಕ್ ಹಾಜರಾತಿಯನ್ನು ತೆಗೆದುಕೊಳ್ಳುವ ಹಿನ್ನೆಲೆಯಲ್ಲಿ ನಿಗದಿಪಡಿಸಿದ ಸಮಯಕ್ಕಿಂತ ಅರ್ಧಗಂಟೆ ಮುಂಚಿತವಾಗಿ ಹಾಜರಿರುವಂತೆ ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಂಆರ್‌ಎಂ/ಜಿಪಿಆರ್.

# ಕಿರಿಯ/ಹಿರಿಯ ಸಹಾಯಕರುಗಳ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರ ಪ್ರಕಟ

**ಬೆಂಗಳೂರು, ಫೆಬ್ರವರಿ 18, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಫೆಬ್ರವರಿ 12 ರದು ನಡೆಸಿದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿನ ಹಿರಿಯ ಸಹಾಯಕರು ಮತ್ತು ಕಿರಿಯ ಸಹಾಯಕರ ಹುದ್ದೆಗಳ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಮತ್ತು ಫೆಬ್ರವರಿ 12 ರಂದು ನಡೆಸಿದ ಕರ್ನಾಟಕ ರಾಜ್ಯ ಸಿವಿಲ್ ಸೇವೆಯಡಿಯ ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ http://kpsc.kar.nic.in/Key Answers ನಲ್ಲಿ ಪ್ರಕಟಿಸಿದೆ.

ಕೀ ಉತ್ತರಗಳ ಬಗ್ಗೆ ಆಕ್ಷೇಪಣೆ ಇದ್ದಲ್ಲಿ ಅಭ್ಯರ್ಥಿಗಳು ಆಕ್ಷೇಪಣೆಗಳನ್ನು ಪುಷ್ಟೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ವಿಷಯ, ಪ್ರಶ್ನೆ ಪತ್ರಿಕೆಯ ಶ್ರೇಣಿ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಣೆಯೊಂದಿಗೆ ಫೆಬ್ರವರಿ 22 ರೊಳಗೆ ಕಚೇರಿಯ ಕಾರ್ಯದ ವೇಳೆಯೊಳಗೆ ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, "ಉದ್ಯೋಗ ಸೌಧ", ಬೆಂಗಳೂರು – 560 001 ಈ ವಿಳಾಸಕ್ಕೆ ಸಲ್ಲಿಸಬಹುದಾಗಿದೆ.

ಆಯೋಗದ ಅಂತರ್ಜಾಲದಲ್ಲಿ ನಿಗದಿತ ನಮೂನೆಯನ್ನು ಪ್ರಕಟಿಸಲಾಗಿದ್ದು, ಸದರಿ ನಮೂನೆಯಲ್ಲಿಯೇ ಆಕ್ಷೇಪಣೆಗಳನ್ನು ನಿಗದಿಪಡಿಸಲಾದ ಶುಲ್ಕದೊಂದಿಗೆ ಸಲ್ಲಿಸತಕ್ಕದ್ದು. ನಿಗದಿತ ನಮೂನೆಯಲ್ಲಿಲ್ಲದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು ಮತ್ತು ಅವಧಿ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಂಆರ್‌ಎಂ/ಜಿಪಿಆರ್.

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಫೆಬ್ರವರಿ 18, (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:19–02–2017ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಸಿ.ವಿ. ದೇವರಾಜು ಮತ್ತು ತಂಡ, ಬೆಂಗಳೂರು ಜಿಲ್ಲೆ ರವರಿಂದ ದೇಶಭಕ್ತಿ ಗೀತೆಗಳ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಕು:ಸೌಮ್ಯ. ಎಮ್. ಎನ್ ಮತ್ತು ತಂಡ , ಬೆಂಗಳೂರು ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ** ಸಹಯೋಗದೊಂದಿಗೆ **ನಟನಂ ಇನ್‌ಸ್ಟ್ಯೂಟ್ ಆಫ್ ಡಾನ್ಸ್, ಬೆಂಗಳೂರು** ರವರಿಂದ **ಭರತನಾಟ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ , ಬಸವೇಶ್ವರ ನಗರ, **ಬೆಂಗಳೂರು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ** ಸೊಸೈಟಿ, ಬೆಂಗಳೂರು ರವರ ಸಹಯೋಗದೊಂದಿಗೆ **ಶಾಂಕರಿ ನೃತ್ಯ ಕಲಾಕ್ಷೇತ್ರ , ಮೈಸೂರು ರವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ Earthological, Bangalore ರವರ ವತಿಯಿಂದ ಕಸ ವಿಂಗಡಣೆ ಹಾಗೂ ನಿರ್ವಹಣೆಯ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಗ್ಗೆ 8.00 ರಿಂದ 9.00** ಗಂಟೆಯವರಿಗೆ **Center for Social Action, Christ University ವಿದ್ಯಾರ್ಥಿಗಳಿಂದ ಸಾರ್ವಜನಿಕರಿಗೆ** ಬೀದಿ ನಾಟಕದ **ಮೂಲಕ ಮಾನಸಿಕ ಆರೋಗ್ಯದ ಕುರಿತು (Mental Health Awareness) ಅರಿವು ಮೂಡಿಸುವ ಬಗ್ಗೆ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

## ಲೈಂಗಿಕ ದೌರ್ಜನ್ಯದಿಂದ ಮಕ್ಕಳನ್ನು ಸಂರಕ್ಷಿಸುವ ಕಾಯ್ದೆ ಜಾರಿ

ಬೆಂಗಳೂರು, ಫೆಬ್ರವರಿ 18, (ಕರ್ನಾಟಕ ವಾರ್ತೆ)

ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಸಂರಕ್ಷಿಸುವ ಕಾಯ್ದೆಯು ಮಕ್ಕಳನ್ನು ಲೈಂಗಿಕ ಹಲ್ಲೆ, ಲೈಂಗಿಕ ಕಿರುಕುಳ ಮತ್ತು ಅಶ್ಲೀಲ ವಿಷಯಗಳ ಹಿಂಸೆಗಳಿಂದ ರಕ್ಷಿಸುತ್ತದೆ. ಇಂತಹ ಪ್ರಾಸಂಗಿಕ ಪ್ರಕರಣಗಳ ನ್ಯಾಯ ವಿಚಾರಣೆ ಮಾಡಲು "ವಿಶೇಷ ನ್ಯಾಯಾಲಯಗಳು ರಾಜ್ಯದಲ್ಲಿ. ಸ್ಥಾಪಿತಗೊಂಡಿದೆ.

ಹಿಂದೂ ದತ್ತು ಮತ್ತು ನಿರ್ವಹಣಾ ಕಾಯ್ದೆ.1956 ಮತ್ತು ವಾರ್ಡ್ಸ್ ಕಾಯ್ದೆ, 1860:

ಭಾರತದಲ್ಲಿ ದತ್ತು ಸಕ್ರಿಯವಾಗಿ ಏಕ ರೀತಿಯ ಕಾಯ್ದೆ ಇಲ್ಲದೆ ಇರುವುದರಿಂದ ಆಯಾ ಧರ್ಮಕ್ಕೆ ಅನುಗುಣವಾಗಿ ದತ್ತು ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ. ಪ್ರಮುಖವಾಗಿ ಹಿಂದೂ ದತ್ತು ಮತ್ತು ನಿರ್ವಹಣಾ ಕಾಯ್ದೆ, 1956 ಮತ್ತು ವಾರ್ಡ್ಸ್ ಕಾಯ್ದೆ, 1860 ಈ ಎರಡು ಕಾಯ್ದೆಯಡಿಯಲ್ಲಿ ದತ್ತು ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ.

ಸಮಗ್ರ ಮಕ್ಕಳ ರಕ್ಷಣಾ ಯೋಜನೆ ಅಡಿಯಲ್ಲಿನ ಕಾರ್ಯಕ್ರಮಗಳು ಮತ್ತು ಚಟುವಟಿಕೆಗಳು

ರಕ್ಷಣೆ, ಸಹಕಾರ ಮತ್ತು ಪುನರ್‌ವಸತಿಯ ಸೇವೆಗಳು:

ಮಕ್ಕಳ ಸಹಾಯವಾಣಿ ಸೇವೆ:

ಸಂಕಷ್ಟದಲ್ಲಿರುವ ಮಕ್ಕಳಿಗೆ ತುರ್ತು ಸೇವೆಯನ್ನು ಒದಗಿಸುವ ಸಲುವಾಗಿ ಮಕ್ಕಳ ಸಹಾಯವಾಣಿಯು ದೇಶದಲ್ಲಿ ದಿನದ 24 ಗಂಟೆಗಳು ಕಾರ್ಯನಿರ್ವಹಿಸುತ್ತಿದೆ. ಮಕ್ಕಳ ಸುರಕ್ಷಿತ ಜಾಲವನ್ನು ಪ್ರತಿಯೊಂದು ಮಗುವೂ ತಲುಪುವ ಗುರಿಯನ್ನು ಮಕ್ಕಳ ಸಹಾಯವಾಣಿ ಹೊಂದಿರುತ್ತದೆ. ಮಕ್ಕಳ ಸಹಾಯವಾಣಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರದ ಮಕ್ಕಳ ರಕ್ಷಣಾ ಸೇವೆಗಳಲ್ಲಿ ಪ್ರಮುಖವಾದುದಾಗಿದೆ. ಈ ಕಾರ್ಯಕ್ರಮವನ್ನು 1999ರಲ್ಲಿ ಕೇಂದ್ರ ಸರ್ಕಾರದಿಂದ ಅನುಷ್ಠಾನಕ್ಕೆ ತರಲಾಗಿದ್ದು, ರಾಜ್ಯದಲ್ಲಿ 24 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಿದೆ. ಚೈಲ್ಡ್ ಲೈನ್ ಇಂಡಿಯಾ ಫೌಂಡೇಷನ್, ಮುಂಬೈ, ಇದು ಒಂದು ಸ್ವಯಂ ಸೇವಾ ಸಂಸ್ಥೆಯಾಗಿದ್ದು, ದೇಶದ ಎಲ್ಲಾ ನಗರ ಹಾಗೂ ಜಿಲ್ಲೆಗಳಲ್ಲಿ ಮಕ್ಕಳ ಸಹಾಯವಾಣಿ ಸೇವೆಗಳನ್ನು ಅನುಷ್ಠಾನಗೊಳಿಸಲು ಮತ್ತು ಉಸ್ತುವಾರಿ ನೋಡಿಕೊಳ್ಳಲು ಈ ಸಂಸ್ಥೆಯನ್ನು ಭಾರತ ಸರ್ಕಾರವು ರಾಷ್ಟ್ರಮಟ್ಟದ ಮಾತೃ ಸಂಸ್ಥೆಯಾಗಿ ಗುರುತಿಸಿದೆ.

ಮಕ್ಕಳ ಸಹಾಯವಾಣಿ ಸೇವೆಯು, ಮಂಗಳೂರು, ಬೆಂಗಳೂರು, ಕಲ್ಬುರ್ಗಿ, ಬೀದರ್, ಧಾರವಾಡ, ದಾವಣಗೆರೆ, ಮೈಸೂರು, ಶಿವಮೊಗ್ಗ, ಮಂಡ್ಯ, ಬಳ್ಳಾರಿ, ಕೋಲಾರ, ಹಾಸನ, ಕೊಪ್ಪಳ, ಕೊಡಗು, ತುಮಕೂರು, ಬೆಳಗಾವಿ, ವಿಜಯಪುರ,

ಉಡುಪಿ, ರಾಮನಗರ, ಉತ್ತರ ಕನ್ನಡ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಯಾದಗಿರಿ, ಗದಗ, ಒಳಗೊಂಡಂತೆ ಒಟ್ಟು 24 ಜಿಲ್ಲೆಗಳಲ್ಲಿ ಪ್ರಚಲಿತದಲ್ಲಿದೆ.

ನಗರ ಮತ್ತು ಅರೆನಗರ ಪ್ರದೇಶಗಳಲ್ಲಿ ಮಕ್ಕಳ ರಕ್ಷಣೆ ಮತ್ತು
ಪೋಷಣೆಗಾಗಿ ತೆರೆದ ತಂಗುದಾಣಗಳು:

ನಗರ ಮತ್ತು ಅರೆನಗರ ಪ್ರದೇಶಗಳಲ್ಲಿ ಕುಟುಂಬದ ಬೆಂಬಲ ಇಲ್ಲದ, ಪಾಲನೆ ಮತ್ತು ಪೋಷಣೆಯ ಅಗತ್ಯವುಳ್ಳ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಬೆಂಬಲ ಒದಗಿಸುವುದೇ ಈ ಕಾರ್ಯಕ್ರಮದ ಗುರಿಯಾಗಿರುತ್ತದೆ – ಮುಖ್ಯವಾಗಿ ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳು, ಚಿಂದಿ ಆಯುವ ಮಕ್ಕಳು, ಬೀದಿ ಮಕ್ಕಳು, ಕೆಲಸ ಮಾಡುವ ಮಕ್ಕಳು, ಅನಾಥ ಮಕ್ಕಳು, ಸಾಗಾಣೆಯಾದ ಮಕ್ಕಳು, ಪರಿತ್ಯಜಿಸಲ್ಪಟ್ಟ ಮಕ್ಕಳು, ಶೋಷಣೆ, ದೌರ್ಜನ್ಯಕ್ಕೆ ಒಳಗಾದ ಬೀದಿ ಮಕ್ಕಳು.

<u>ಉದ್ದೇಶಗಳು:-</u>

- ಅನಾಥ ಹಾಗೂ ಅಲಕ್ಷ್ಯ ಬೀದಿ ಮಕ್ಕಳಿಗೆ ಈ ತಂಗುದಾಣಗಳು, ಪೌಷ್ಟಿಕ ಆಹಾರ, ಆರೋಗ್ಯ ಸೇವೆ, ಸ್ವಚ್ಛತೆ ಹಾಗೂ ನೈರ್ಮಲ್ಯ, ಕುಡಿಯುವ ಶುದ್ಧ ನೀರು, ಶಿಕ್ಷಣ, ಆಟಪಾಠಗಳಿಗೆ ಇತರೆ ಸೌಕರ್ಯಗಳನ್ನು ಒದಗಿಸಿ ಅವರಿಗೆ ಶೋಷಣೆ/ದೌರ್ಜನ್ಯಗಳ ವಿರುದ್ಧ ರಕ್ಷಣೆಯನ್ನು ಒದಗಿಸುವುದು.
- ಬೀದಿ ಮಕ್ಕಳನ್ನು ಶಾಲೆಗಳಿಗೆ / ಕೆಲಸಕ್ಕೆ ಸೇರಿಸುವುದು, ವೃತ್ತಿಪರ ಶಿಕ್ಷಣ ನೀಡುವುದು, ಆರೋಗ್ಯ ಸೇವೆಗಳನ್ನು ಒದಗಿಸುವುದು ಹಾಗೂ ಅವರಲ್ಲಿ ಸಾಮಾನ್ಯವಾಗಿರುವ HIV/AIDS ರೋಗ ಹಾಗೂ ಮಾದಕ ವಸ್ತುಗಳ ಬಳಕೆಯನ್ನು ಕಡಿಮೆ ಮಾಡುವುದು.

ಮನೆ ಅಥವಾ ಕುಟುಂಬದ ಬೆಂಬಲ ಇಲ್ಲದಿರುವ ಬೀದಿ ಮಕ್ಕಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 24 ಗಂಟೆ ತೆರೆದಿರುವ ತಂಗುದಾಣಗಳನ್ನು ನಡೆಸಲಾಗುತ್ತಿದೆ. ಅಲ್ಲದೇ 2014-15ನೇ ಸಾಲಿಗೆ ಕೇಂದ್ರ ಸರ್ಕಾರವು ರಾಜ್ಯದಲ್ಲಿ ಹೊಸದಾಗಿ 18 ಮಕ್ಕಳ ತೆರೆದ ತಂಗುದಾಣಗಳಿಗೆ ಅನುಮೋದನೆ ನೀಡಿದ್ದು, ಈ ಹೊಸ 18 ತೆರೆದ ತಂಗುದಾಣಗಳು 2014ರ ಅಕ್ಟೋಬರ್ ಮಾಹೆಯಿಂದ ಕಾರ್ಯಾರಂಭ ಮಾಡಿರುತ್ತವೆ. ರಾಜ್ಯದಲ್ಲಿ ಪ್ರಸ್ತುತ ಒಟ್ಟು 42 ಮಕ್ಕಳ ತೆರೆದ ತಂಗುದಾಣಗಳಿರುತ್ತವೆ. ಒಟ್ಟು ಯೋಜನಾ ವೆಚ್ಚದಲ್ಲಿ ಶೇಕಡ 90 ರಷ್ಟು ಕೇಂದ್ರ ಸರ್ಕಾರವು ಹಾಗೂ ಉಳಿದ ವೆಚ್ಚವನ್ನು ಸಂಬಂಧಪಟ್ಟ ಸಂಸ್ಥೆಯು ಭರಿಸಬೇಕಾಗುತ್ತದೆ. ಪ್ರಸ್ತುತ 18 ಜಿಲ್ಲೆಗಳಲ್ಲಿ 42 ತೆರೆದ ತಂಗುದಾಣಗಳನ್ನು 40 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ.

ಎಸ್‌ಎಂ/ಕೆಎಂ

# ADMISSION TO RASHTRIYA INDIAN MILITARY COLLEGE, DEHRANDUN

Bengaluru, February 18 (Karnataka Information)

Application are invited from BOYS of Karnataka for admission to Rashtriya Indian Military College (RIMC), Dehradun (Uttarakhand) for Jan 2018 Term. The Entrance Examination for the same will be conducted in Bangalore on 01 (Thu) and 02 (FRI) June, 2017.

Candidate appearing for the above test should not be less than Eleven and half years in age but should not have attained the age of 13 years as on 01 Jan 2018. i.e., they should have been for not earlier than 02 Jan 2005 and not later that 01 Jul 2006. The boy should either be studying in Class VII or passed Class VII from any recognized school at the time of admission to the RIMC. i.e. on 1 Jan 2018. The primary aim of this institution is to prepare the boys for entry into Defence Services and to provide quality all round education to young boys. The fee is presently Rs 42,400/- per year.

Procedure to obtain Application Forms: The prospectus-cum-application form and booklet of old question papers can be obtained personally/Registered Post by sending a written request from the Director, Department of Sainik Welfare and Resettlement, Field Marshal KM Cariappa Bhavan, 58, Field Marshal KM Cariappa Road, Bangalore – 560 025 on payment of Rs550/- (for speed post) (for General Candidates) and (Rs 505/- for SC/ST Candidates') through Demand Draft favoring "THE COMMANDANT RIMC DEHRADUN" PAYABLE AT SBI, TEL BHAVAN, DEHRADUN 9BANK CODE NO. 01576). Candidates who desires to obtain the application form by Registered Parcel should send a self addressed

envelope measuring 11" x 9" size duly affixed with Rs 40/- postage stamps. The address should be TYPED/WRITTEN clearly in CAPITAL LETTERS with PIN CODE and contact number on the envelope. Department of Sainik Welfare and Resettlement will NOT be responsible for any postal delay or loss in transit.

Last Date: Prescribed application forms duly completed, in duplicate, should reach Director, Department of Sainik Welfare and Resettlement, Field Marshal KM Cariappa Bhavan, 58, Field Marshal KM Cariappa Road, Bangalore - 560 025 along with the following documents on or before 31.03.2017.

1. Five passport size photographs (including one each affixed on the application form).
2. Attested copy of Birth Certificate issued by Municipal Corporation/Gram Panchayat (in English version only)
3. Attested copy of SC/ST certificate for SC/ST candidates (in English version only)
4. Admit card envelope duly addressed and affixed with Rs 40/- for sending the Admission Ticket by Speed/Registered Post.

# DAK ADALAT

**Bangalore, February 18(Karnataka Information):**

**The Chief Postmaster General, Karnataka Postal Circle, No. 1 Beaulieu, Palace Road (opposite Maharani's College of Science) Bengaluru -1 will conduct a "Dak Adalat" for redressal of public grievances relating to Postal Services on 3rd March 2017 at 11-30 hours.**

**Members of the public and esteemed customers of Department of Posts in Bengaluru Region may address their grievances if any, to the Assistant Director (Postal Operations) O/o**

Chief Postmaster General, Karnataka Circle, Bengaluru-560 001, so as to reach the officer latest by 27th February 2017. Grievances can also be sent by email to tech.ka@indiapost.gov.in/karcopo@gmail.com. It is requested that brief and specific details with relevant facts and figures may please be furnished along with complete contact details to facilitate speedy redressal.

SM/KM

## Personality Test for Gazetted Probationers

**Bangalore, February 18(Karnataka Information):**

The Karnataka Public Service Commission has scheduled Personality Test for Gazetted Probationers-2014 with effect from 20-02-2017. The candidates appearing for Personality Test are instructed to produce their Aadhar Card-U.I.D/Adhaar Number for verification purpose. They need to download the personal details format from the Commission's website and the same should be filled and submitted on the day of Personality Test. On the day of Personality Test arrangements have been made to obtain Bio-Metric attendance, hence candidates are required to present 1/2 an hour before fixed for the personality Test.

ಛಾಯಾಚಿತ್ರ ಶೀರ್ಷಿಕೆ:

ಚೀನಾ ದೇಶದ ಪತ್ರಕರ್ತರ ನಿಯೋಗ ಶನಿವಾರ ವಾರ್ತಾ ಇಲಾಖೆ ಕೇಂದ್ರ ಕಛೇರಿಗೆ ಭೇಟಿ ನೀಡಿತು. ಈ ಸಂದರ್ಭದಲ್ಲಿ ಇಲಾಖೆ ನಿರ್ದೇಶಕ ಎನ್.ಆರ್. ವಿಶುಕುಮಾರ್, ಉಪ ನಿರ್ದೇಶಕ ಹೆಚ್.ಬಿ. ದಿನೇಶ್ ಅವರುಗಳು ಉಪಸ್ಥಿತರಿದ್ದರು.